ಇ) ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳ ಅಧಿಕಾರ ಮತ್ತು ಕರ್ತವ್ಯಗಳನ್ನು ನಮೂದಿಸಿ ನಿಯಮಗಳನ್ನು ಹೊರಡಿಸಲಾಗಿದೆ.

ಈ) ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಹುದ್ದೆಗಳಲ್ಲಿ ನೇಮಕಾತಿ ಹೊಂದಿರುವ ಸ್ಟೈಪಂಡರಿ ಪದವೀಧರರು ಸೇವೆಯಿಂದ ನಿವೃತ್ತಿ ಹೊಂದಿದಾಗ ಗ್ರಾಮಪಂಚಾಯಿತಿ ಕಾರ್ಯದರ್ಶಿ ಹುದ್ದೆಗಳಲ್ಲಿ ಸಲ್ಲಿಸಿರುವ ಸೇವೆಯ ಅವಧಿಯನ್ನು ಪರಿಗಣನೆಗೆ ತೆಗೆದುಕೊಂಡು ನಿವೃತ್ತಿ ವೇತನ ಪಡೆಯಲು ಅರ್ಹರಿದ್ದಲ್ಲಿ ನಿವೃತ್ತಿ ವೇತನವನ್ನು ಮಂಜೂರು ಮಾಡಲಾಗುವುದು.

ಉ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಮಂಗಳೂರು ವೆನ್‌ಲಾಕ್ ಆಸ್ಪತ್ರೆಯಲ್ಲಿ ವೈದ್ಯಕೀಯ ಸಲಕರಣೆ ಕುರಿತು.

1849 - ಶ್ರೀ ಎನ್. ಯೋಗೇಶ್ ಭಟ್(ಮಂಗಳೂರು) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರು ನಗರದ ವೆನ್‌ಲಾಕ್ ಆಸ್ಪತ್ರೆ ಹಾಗೂ ಲೇಡಿಗೋಷನ್ ಆಸ್ಪತ್ರೆಗಳಿಗೆ ವೈದ್ಯಕೀಯ ಸಲಕರಣೆ ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಕ್ಲಿನಿಕಲ್ ಫೀಸ್‌ನಿಂದ ಹಾಗೂ ವಿಶ್ವಬ್ಯಾಂಕಿನ ಆರ್ಥಿಕ ನೆರವಿನಿಂದ ವೆಚ್ಚ ಮಾಡಲು ಸರ್ಕಾರವು ಕೈಗೊಂಡ ಕ್ರಮಗಳೇನು?

ಆ) ಬೇರೆ ಬೇರೆ ವೈದ್ಯಕೀಯ ಸಂಸ್ಥೆಗಳಿಂದ ಸಂಗ್ರಹವಾದ ಕ್ಲಿನಿಕಲ್ ಫೀಸ್‌ಎಷ್ಟು? ಹಾಗೂ ಇದರ ಸದ್ವಿನಿಯೋಗ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಡಾ॥ ಎಂ. ಶಂಕರ್ ನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) :

ಅ) ಕ್ಲಿನಿಕಲ್ ಶುಲ್ಕದಿಂದ ಬಂದ ಒಟ್ಟು ಹಣದಲ್ಲಿ ರೂ.5,07,282-00ಗಳನ್ನು ಆಸ್ಪತ್ರೆಯ ಅಭಿವೃದ್ಧಿಗಾಗಿ ವಿನಿಯೋಗಿಸಲಾಗಿದೆ. ವಿಶ್ವಬ್ಯಾಂಕ್ ನೆರವಿನಿಂದ ರೂ.3,02,734-00ಗಳ ಉಪಕರಣಗಳು ಸರಬರಾಜಾಗಿದ್ದ, ಮತ್ತು ರೂ.11,08,548-00ಗಳ ಉಪಕರಣದ ಸರಬರಾಜು ಆದೇಶವು ಆಸ್ಪತ್ರೆಯ ಅಧಿಕಾರಿಗಳಿಗೆ ತಲುಪಿದೆ.

ಆ) ಬೇರೆ ಬೇರೆ ವೈದ್ಯಕೀಯ ಸಂಸ್ಥೆಗಳಿಂದ ಸಂಗ್ರಹವಾದ ಕ್ಲಿನಿಕಲ್ ಫೀಸ್ ಹಣ ರೂ.1,04,18,471-00 ದರಲ್ಲಿ ರೂ.5,07,282-00ನ್ನು ವಿನಿಯೋಗಿಸಲಾಗಿದೆ. ಉಳಿದ ಮೊತ್ತವನ್ನು ಆಸ್ಪತ್ರೆಗೆ ಅವಶ್ಯಕವಿರುವ ಉಪಕರಣಗಳನ್ನು ಖರೀದಿಸಲು ಹಾಗೂ ಶಸ್ತ್ರ ಚಿಕಿತ್ಸಾ ಕೊಠಡಿಗಳ ಅಭಿವೃದ್ಧಿಗಾಗಿ ಮತ್ತು ಕೆಟ್ಟುನಿಂತಿರುವ ಲಿಫ್ಟ್‌ನ ಬದಲಾಗಿ ಹೊಸ ಲಿಫ್ಟ್‌ನ್ನು ಅಳವಡಿಸಿ ಉಪಯೋಗಿಸಲು ಕ್ರಮ ತೆಗೆದುಕೊಳ್ಳಲಾಗಿದೆ.